ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 56 ಇತರೆ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 06-11-2015.

## ಸುತ್ತೋಲೆ

ವಿಷಯ:- ಬೆಂಗ್ರಳೂರು ನಗರದಲ್ಲಿ ವಾಹನ ದಟ್ಟಣೆಯನ್ನು ಕಡಿಮೆ ಮಾಡುವ ದಿಸೆಯಲ್ಲಿ ಅನುಸರಿಸಬೇಕಾದ ಮಾರ್ಗೋಪಾಯಗಳ ಬಗ್ಗೆ.

* * * * *

ಬೆಂಗಳೂರು ನಗರವು ಭಾರತದಲ್ಲಿಯೇ ಪ್ರಮುಖ ನಗರಗಳ ಪೈಕಿ ಒಂದಾಗಿದ್ದು, 11 ಮಿಲಿಯನ್ ಜನಸಂಖ್ಯೆ ಹಾಗೂ 5.6 ಮಿಲಿಯನ್ ವಾಹನಗಳನ್ನು ಹೊಂದಿರುತ್ತದೆ. Peak hours ಗಳಲ್ಲಿ ಬೆಂಗಳೂರು ನಗರದ ಕೇಂದ್ರ ಭಾಗದಲ್ಲಿನ ಬಹುತೇಕ ರಸ್ತೆಗಳಲ್ಲಿ ಹೆಚ್ಚಿನ ವಾಹನ ದಟ್ಟಣೆಯಿದ್ದು, ಬಹಳಷ್ಟು ವ್ಯಕ್ತಿಗಳು ಕಾರುಗಳಲ್ಲಿ ಏಕವ್ಯಕ್ತಿ ಸಂಚಾರ ಮಾಡುತ್ತಿರುವುದರಿಂದ ವಾಹನ ದಟ್ಟಣೆಯು ಹೆಚ್ಚಾಗಿರುವುದು ಕಂಡು ಬಂದಿರುವ ಬಗ್ಗೆ ಬೆಂಗಳೂರು ನಗರ ಹೆಚ್ಚುವರಿ ಪೋಲೀಸ್ ಆಯುಕ್ತರವರು ತಿಳಿಸಿರುತ್ತಾರೆ.

ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆಯನ್ನು ಕಡಿಮೆ ಮಾಡುವ ದಿಸೆಯಲ್ಲಿ ಕೆಲವೊಂದು ಮಾರ್ಗೋಪಾಯಗಳನ್ನು ಅನುಸರಿಸಬೇಕಾಗಿದ್ದು, ಸರ್ಕಾರಿ ಕಛೇರಿಗಳಲ್ಲಿನ ಅಧಿಕಾರಿಗಳು ಪ್ರತ್ಯೇಕ ವಾಹನಗಳನ್ನು ಬಳಸುವ ಬದಲು ಕಾರ್ ಪೂಲಿಂಗ್ ಅಥವಾ ಕಾರ್ ಶೇರಿಂಗ್ ಪದ್ಧತಿಯನ್ನು ಅಳವಡಿಸಿಕೊಂಡಲ್ಲಿ ಹಾಗೂ ಸ್ವಂತ ವಾಹನಗಳಿಗೆ ಬದಲಾಗಿ ಸಾರ್ವಜನಿಕ ಸಾರಿಗೆಯನ್ನು ಉಪಯೋಗಿಸಿದಲ್ಲಿ ಹೆಚ್ಚು ವಾಹನಗಳು ರಸ್ತೆಗೆ ಇಳಿಯದಂತೆ ಮಾಡುವ ದಿಸೆಯಲ್ಲಿ ಪರಿಣಾಮಕಾರಿಯಾಗಲಿದೆ. ಇದರಿಂದ ವಾಯು ಮಾಲಿನ್ಯವೂ ಸಹ ಕಡಿಮೆಯಾಗಲಿದೆ.

ಆದ್ದರಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆ ಮತ್ತು ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿಗಳು ಇಲಾಖೆಯಲ್ಲಿ ಲಭ್ಯವಿರುವ ಒಟ್ಟು ವಾಹನಗಳನ್ನು ಪೂಲಿಂಗ್ ಅಥವಾ ಶೇರಿಂಗ್ ವ್ಯವಸ್ಥೆಯಲ್ಲಿ ಉಪಯೋಗಿಸಲು ವಿಶೇಷವಾಗಿ ಬೆಂಗಳೂರಿನಲ್ಲಿ ಅಸ್ತಿತ್ವದಲ್ಲಿರುವ ಕಛೇರಿಗಳಲ್ಲಿ ಈ ಪದ್ಧತಿಯನ್ನು ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ. ಈ ದಿಸೆಯಲ್ಲಿ ಎಲ್ಲಾ ಅಧಿಕಾರಿಗಳು ಸಹಕರಿಸಲು ಸಹ ಸೂಚಿಸಿದೆ.

(ಡಾ:ಎನ್.ನಾಗಾಂಬಿಕಾದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ-(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ :

1) ಆಯುಕ್ತರು, ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2) ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
3) ವಿಶೇಷ ಆಯುಕ್ತರು, ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
4) ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ
5) ಮಿಷನ್ ಡೈರೆಕ್ಟರ್, ಎನ್.ಆರ್.ಎಲ್.ಎಂ.
6) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ
7) ಮುಖ್ಯ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಅಭಿವೃದ್ಧಿ ನಿಗಮ
9) ನಿರ್ದೇಶಕರು, ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣ ತರಬೇತಿ ಸಂಸ್ಥೆ, ಮೈಸೂರು.
10) ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ
11) ನಿರ್ದೇಶಕರು, ಪಂಚಾಯತ್ ರಾಜ್ -1
12) ನಿರ್ದೇಶಕರು, ಪಂಚಾಯತ್ ರಾಜ್ -2
13) ಮುಖ್ಯಸ್ಥರು ಗ್ರಾಮ ಸ್ವರಾಜ್ ಯೋಜನೆ

ಪ್ರತಿಯನ್ನು ಮಾಹಿತಿಗಾಗಿ:-

1) ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಗ್ರಾ.ಅ.ಪ. ಇಲಾಖೆ
2) ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ)/ಸರ್ಕಾರದ ಉಪ ಕಾರ್ಯದರ್ಶಿ(ಆ) ರವರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾ.ಅ.ಪ. ಇಲಾಖೆ.
3) ಹೆಚ್ಚುವರಿ ಪ್ರತಿ/ ಶಾಖ ರಕ್ಷಾ ಕಡತ
4) ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ.ಪ. ಇಲಾಖೆ.